**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ** 2020-21ನೇ ಸಾಲಿನ ಜೂನ್-2020ರ ವರೆಗಿನ ಮೊದಲನೇ ತ್ರೈಮಾಸಿಕ ಸಾಲದ ಕಂತು ಮತ್ತು ಬಡ್ಡಿಯನ್ನು ಹುಡ್ಕೋ ಸಂಸ್ಥೆಗೆ ಮರುಪಾವತಿಸಲು ಅನುದಾನ ಬಿಡುಗಡೆ ಮಾಡುವ ಬಗ್ಗೆ ಆದೇಶ.

ಓದಲಾಗಿದೆ: ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರವರ ಪತ್ರ ಸಂಖ್ಯೆ: ಬಿ5ಸಿ /17/2019-20 ದಿನಾಂಕ: 13.05.2020.

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ, ಡಿಜಿ & ಐಜಿಪಿ ರವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ, 2020-21ನೇ ಸಾಲಿನ ಆಯವ್ಯಯದಲ್ಲಿ ಕರ್ನಾಟಕ ರಾಜ್ಯ ಪೊಲೀಸ್ ವಸತಿ ಮತ್ತು ಮೂಲಭೂತ ಸೌಲಭ್ಯ ಅಭಿವೃದ್ಧಿ ನಿಗಮ ನಿಯಮಿತವು ಹಣಕಾಸು ಸಂಸ್ಥೆಗಳಿಂದ ಪಡೆದ ಸಾಲದ ಕಂತು ಮತ್ತು ಬಡ್ಡಿ ಮರುಪಾವತಿಗೋಸ್ಕರ ಈ ಕೆಳಕಂಡ ಲೆಕ್ಕ ಶೀರ್ಷಿಕೆಗಳಲ್ಲಿ ಒಟ್ಟು ರೂ.243.00 ಲಕ್ಷಗಳನ್ನು ಒದಗಿಸಲಾಗಿರುತ್ತದೆಂದು ತಿಳಿಸಿರುತ್ತಾರೆ.

| | |
|---|---|
| 1. 4055-00-211-0-01-240 NP Debt Servicing-Principal | 231.00 lakhs |
| 2. 2055-00-113-0-03-240 NP Debt Servicing-Int. Repayment | 12.00 lakhs |
| **Total** | **243.00** |

2020ನೇ ಜೂನ್ ತಿಂಗಳ ಅಂತ್ಯಕ್ಕೆ ಹುಡ್ಕೋ ಸಂಸ್ಥೆಗೆ ಮೊದಲನೇ ತ್ರೈಮಾಸಿಕ ಕಂತಿನ ಸಾಲ ಮತ್ತು ಬಡ್ಡಿ ಮರುಪಾವತಿ ಮಾಡಲು ಸಾಲದ ಕಂತಿನ ಪಾವತಿಗಾಗಿ ರೂ.76,95,840/- ಮತ್ತು ಸಾಲನ ಮೇಲಿನ ಬಡ್ಡಿ ಮರುಪಾವತಿಗಾಗಿ ರೂ.5,53,762/- ಗಳು ಸೇರಿದಂತೆ ನಿಗಮಕ್ಕೆ ಒಟ್ಟು ರೂ.82,49,602/- ಗಳು ಅಗತ್ಯವಿರುತ್ತದೆ. ಎಂದು ದಿನಾಂಕ 30.04.2020ರ ಪತ್ರದಲ್ಲಿ ಕೆ.ಎಸ್.ಪಿ.ಹೆಚ್ & ಐ.ಡಿ.ಸಿ.ಎಲ್., ಬೆಂಗಳೂರು ರವರು ಹುಡ್ಕೋದಿಂದ ಬಂದ ಕೋರಿಕೆ ಪತ್ರವನ್ನು ಒದಗಿಸಿ, ಸರ್ಕಾರವು 2019-20ನೇ ಸಾಲಿನ ಒಟ್ಟು ನಾಲ್ಕು ತ್ರೈಮಾಸಿಕಗಳಲ್ಲಿ ಸಾಲದ ಕಂತು ಮತ್ತು ಅದರ ಮೇಲಿನ ಬಡ್ಡಿಯನ್ನು ಮರುಪಾವತಿಸಲು ಒಟ್ಟು ರೂ.3,49,11,788/- ಗಳನ್ನು ನಿಗಮಕ್ಕೆ ಬಿಡುಗಡೆ ಮಾಡಲಾಗಿದ್ದು, ಈ ಅನುದಾನಕ್ಕೆ ಉಪಯೋಗ ಪ್ರಮಾಣ ಪತ್ರವನ್ನು ಸಲ್ಲಿಸಿರುವುದಾಗಿ ತಿಳಿಸಿರುತ್ತಾರೆ.

2020-21ನೇ ಸಾಲಿನ ಆಯವ್ಯಯದಲ್ಲಿ ಒದಗಿಸಿದ ಅನುದಾನದಲ್ಲಿ ಲೆಕ್ಕಶೀರ್ಷಿಕೆ 4055-00-211-0-01-240 (NP) Charged ರಲ್ಲಿ ಸಾಲದ ಕಂತನ್ನು ಪಾವತಿಸಲು ರೂ.76,95,840/- ಮತ್ತು ಲೆಕ್ಕ ಶೀರ್ಷಿಕೆ 2055-00-113-0-03-240 (NP) Charged ರಲ್ಲಿ ರೂ. ರೂ.5,53,762/- ಬಡ್ಡಿಯನ್ನು ಸಹ ಹುಡ್ಕೋ ಸಂಸ್ಥೆಗೆ ಮೊದಲನೇ ತ್ರೈಮಾಸಿಕ ಕಂತನ್ನು ಪಾವತಿಸಲು ಒಟ್ಟಾರೆ ರೂ.82,49,602/- ಗಳನ್ನು ಕೆ.ಎಸ್.ಪಿ.ಹೆಚ್ ಮತ್ತು ಐ.ಡಿ.ಸಿ.ಎಲ್, ಬೆಂಗಳೂರು ರವರ ಹಣ ಸಂದಾಯಿತ ರಸೀದಿಯ ಮೂಲಕ

-2

ಡಿಜಿ ಮತ್ತು ಐಜಿಪಿ ರವರ ಮೇಲು ರುಜುವಿನೊಂದಿಗೆ ಖಜಾನೆಯಿಂದ ಹಣವನ್ನು ಸೆಳೆದು ನಿಗಮದಲ್ಲಿ ಠೇವಣಿ ಇಡಲು ಅನುದಾನ ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರ ರವರ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ 44 ಇಎಫ್‌ಎಸ್ 2020, ಬೆಂಗಳೂರು,**

**ದಿನಾಂಕ: 05/ಆಗಸ್ಟ್/2020ರ**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2020-21ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕಶೀರ್ಷಿಕೆ 4055-00-211-0-01-240 ರಲ್ಲಿ ಸಾಲದ ಕಂತನ್ನು ಪಾವತಿಸಲು ಒದಗಿಸಿರುವ ಅನುದಾನದಲ್ಲಿ ರೂ.76,95,840/- ಗಳು ಮತ್ತು ಲೆಕ್ಕ ಶೀರ್ಷಿಕೆ 2055-00-113-0-03-240 ರಲ್ಲಿ ರೂ.5,53,762/- ಗಳು ಒಟ್ಟಾರೆ ರೂ.82,49,602/- ಗಳನ್ನು (ರೂಪಾಯಿ ಎಂಬತ್ತೆರಡು ಲಕ್ಷ ನಲವತ್ತೊಂಬತ್ತು ಸಾವಿರದ ಆರು ನೂರ ಎರಡು ಮಾತ್ರ) ಮೊದಲನೇ ತ್ರೈಮಾಸಿಕ ಕಂತಾಗಿ ಹುಡ್ಕೋ ಸಂಸ್ಥೆಗೆ ಪಾವತಿಸುವ ಸಂಬಂಧ ಅನುದಾನ ಬಿಡುಗಡೆ ಮಾಡಿ ಕೆ.ಎಸ್.ಪಿ.ಹೆಚ್. & ಐ.ಡಿ.ಸಿ.ಎಲ್., ಬೆಂಗಳೂರು, ರವರ ಹಣ ಸಂದಾಯಿತ ರಸೀದಿ ಮೂಲಕ ಡಿಜಿ & ಐಜಿಪಿ ರವರ ಮೇಲು ರುಜುವಿನೊಂದಿಗೆ ಖಜಾನೆಯಿಂದ ಹಣವನ್ನು ಸೆಳೆದು ನಿಗಮದಲ್ಲಿ ಠೇವಣಿ ಇಡಲು ಸರ್ಕಾರವು ಮಂಜೂರಾತಿ ನೀಡಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ 257 ವೆಚ್ಚ-11/2020, ದಿನಾಂಕ: 07/07/2020 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

5/8/2020

[ಬಿ.ಎನ್.ದೇವರಾಜ್]
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ (ಪೊಲೀಸ್ ವೆಚ್ಚ)

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್.ಎಸ್.ಎ) ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560 001.

2. ಮಹಾಲೇಖಪಾಲರು (ಇ & ಆರ್.ಎಸ್.ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560 001.

3. ಮಹಾಲೇಖಪಾಲರು (ಎ&ಇ) ಕರ್ನಾಟಕ, ಪಾರ್ಕ್ ಹರ್ಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329 /5369, ಬೆಂಗಳೂರು-560 001.

4. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ನೃಪತುಂಗ ರಸ್ತೆ, ಬೆಂಗಳೂರು.

5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಪೊಲೀಸ್ ಗೃಹ ನಿರ್ಮಾಣ ನಿಗಮ ನಿಯಮಿತ, ಬೆಂಗಳೂರು.

6. ಸರ್ಕಾರದ ಉಪ ಕಾರ್ಯದರ್ಶಿ ಮತ್ತು ಆಂತರಿಕ ಆರ್ಥಿಕ ಸಲಹೆಗಾರರು, ಒಳಾಡಳಿತ ಇಲಾಖೆ, ಬಹುಮಹಡಿ ಕಟ್ಟಡ ಬೆಂಗಳೂರು.

7. ನಿರ್ದೇಶಕರು, ಖಜಾನೆ ನಿರ್ದೇಶನಾಲಯ, ಬೆಂಗಳೂರು.

8. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.

9. ವಿಶೇಷಾಧಿಕಾರಿ (ಜಿ.ಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ.

10. ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ (ಸಮನ್ವಯ), ವಿಧಾನಸೌಧ.

11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.